# ವಾರ್ಡ್ ಸಭೆ ಸಂಖ್ಯೆ.29

ದಿನಾಂಕ:.04.03.2022 ರಂದು ಸಮಯ 11:00 ಗಂಟೆಗೆ ವಾರ್ಡ್.ಸಂಖ್ಯೆ.44 ಮಾರಪ್ಪನಪಾಳ್ಯ ವಾರ್ಡ್ ಕಛೇರಿಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಮಾನ್ಯ ನೋಡಲ್ ಅಧಿಕಾರಿ (ಅಧ್ಯಕ್ಷರು) ರವರ ಅಧ್ಯಕ್ಷತೆಯಲ್ಲಿ ಕರೆಯಲಾಗಿತ್ತು.

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳು

1. ಶ್ರೀ ಎಲ್ ವೆಂಕಟೇಶ್ ನೋಡಲ್ ಅಧಿಕಾರಿ ರವರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ. (ಅಧ್ಯಕ್ಷರು)
2. ಶ್ರೀ ಧನಂಜಯ ಜಿ.ಟಿ ಸಹಾಯಕ ಅಭಿಯಂತರರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ. (ಕಾರ್ಯದರ್ಶಿ)
3. ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು.
4. ಶ್ರೀಮತಿ ಪ್ರೇಮ ಸದಸ್ಯರು.
5. ಶ್ರೀ ನಂಜೇಗೌಡ ಸದಸ್ಯರು.
6. ಶ್ರೀ ರಾಜೇಶ್ ಸದಸ್ಯರು.
7. ಶ್ರೀ ಬಿ.ಆರ್ ಪುಟ್ಟಸ್ವಾಮಿ ಸದಸ್ಯರು.
8. ಶ್ರೀ ನಾಗೇಂದ್ರ ಸದಸ್ಯರು.
9. ಶ್ರೀ ಗೋಪಿ ಸದಸ್ಯರು.
10. ಶ್ರೀ ಪ್ರದೀಪ್‌ಕುಮಾರ್ ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
11. ಶ್ರೀ ಛಾಯಪತಿ ಎಂ ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
12. ಶ್ರೀ ಜಿ.ಕೆ ವೆಂಕಟೇಶಯ್ಯ, ಕೆಲಸ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
13. ಶ್ರೀ ಸೋಮನಾಥ ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ), ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
14. ಶ್ರೀ ದಿನೇಶ್ ಕುಮಾರ್ ಸಹಾಯಕ ಅಭಿಯಂತರರು (ಬೆಸ್ಕಾಂ) ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
15. ಶ್ರೀ ದೇವರಾಜು, ಬೀದಿ ದೀಪ ಇಲಾಖೆ.
16. ಶ್ರೀ ಮಲ್ಲಯ್ಯ, ವಲಯ ಅರಣ್ಯಾ ಸಂರಕ್ಷಣಾ ಇಲಾಖೆ.
17. ಶ್ರೀ ಹರೀಶ್ ಎಸ್.ಕೆ, ಪಿ.ಎಸ್.ಐ, ಆರ್.ಎಂ.ಸಿ ಯಾರ್ಡ್ ಪೋಲೀಸ್ ಠಾಣೆ.
18. ಶ್ರೀ ದರ್ಶನ್ ಎಂ.ಬಿ ಡಿ.ಇ.ಓ ಶಂಕರನಗರ, ಪ್ರಾಥಮಿಕ ಆರೋಗ್ಯ ಕೇಂದ್ರ. ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.

ಶ್ರೀ ಧನಂಜಯ ಜಿ.ಟಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಸದಸ್ಯರನ್ನು, ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಲಾಯಿತು.

| ಕ್ರ.ಸಂ | ವಿವರಣೆ | ಕ್ರಮ |
|---|---|---|
| 1. | ಕಾರ್ಯದರ್ಶಿಗಳು ಹಿಂದಿನ ಸಭೆಯ ನಡವಳಿಗಳನ್ನು ಸಭೆಯಲ್ಲಿ ಹಾಜರಿದ್ದ ಸದಸ್ಯರಿಗೆ, ಅಧಿಕಾರಿಗಳಿಗೆ ಓದಿ ತಿಳಿಸಿದರು. | - |
| 2. | ಕಾರ್ಯದರ್ಶಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಮೊದಲ ಆದ್ಯತೆ ನೀಡಿ ಸಮಸ್ಯೆಯನ್ನು ತಿಳಿಸುವಂತೆ ಸಾರ್ವಜನಿಕರನ್ನು ಕೋರಿದರು. | - |
| 3. | ಶ್ರೀ ನಾಗೇಂದ್ರ ಸದಸ್ಯರು ರವರು ನಂಜುಂಡೇಶ್ವರನಗರದಲ್ಲಿ ಚರಂಡಿ ಹೂಳು ತೆಗೆಯುವ ಕಾಮಗಾರಿಯ ಸರಿಯಾಗಿ ನಡೆಯುತ್ತಿರುವುದಿಲ್ಲ ಎಂದು ತಿಳಿಸಿದರು. | - |
| 4. | ಸಭೆಯಲ್ಲಿ ಹಾಜರಿದ್ದ ಸದಸ್ಯರು ಹಾಗೂ ಅಧಿಕಾರಿಗಳು ಕೋವಿಡ್ ಮತ್ತು ವ್ಯಾಕ್ಸಿನ್ ಬಗ್ಗೆ ಮಾಹಿತಿ ಕೋರಿದರು, ಇದಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಶಂಕರನಗರದ ಶ್ರೀ ದರ್ಶನ್ ಗಣಕಯಂತ್ರ ನಿರ್ವಾಹಕರು ರವರು ಮಾಹಿತಿ ನೀಡಿದರು. | - |
| 5. | ಸಾರ್ವಜನಿಕರು ಶಂಕರನಗರದ ಮುಖ್ಯರಸ್ತೆ ಪಾದಾಚಾರಿ ಮಾರ್ಗ ದುರಸ್ಥಿ ಮಾಡಿಕೊಡಲು ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಕಾಮಗಾರಿ ಅಂದಾಜುಪಟ್ಟಿಯಲ್ಲಿ ಸೇರಿಸಿಲಾಗಿದ್ದು ಅನುಮೋದನೆ ದೊರೆತನಂತರ ಕಾಮಗಾರಿ ನಿರ್ವಹಿಸಲಾಗುವುದು ಎಂದು ತಿಳಿಸಿದರು. | - |
| 6. | ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು ರವರು ಗಜಾನನ ಸ್ಲಂ -1 ರಲ್ಲಿ ನೀರಿನ ಸಮಸ್ಯೆ ಇದೆ ಎಂದು ತಿಳಿಸಿದರು. ಇದಕ್ಕೆ ಬಿಡಬ್ಲೂಎಸ್‌ಎಸ್‌ಬಿ ಸಹಾಯಕ ಅಭಿಯಂತರರು ರವರು ಸಮಸ್ಯೆ ಪರಿಹರಿಸಲಾಗುವುದು ಎಂದು ತಿಳಿಸಿದರು. | ಬಿಡಬ್ಲ್ಯೂಎಸ್.ಎಸ್.ಬಿ ಎಲಾಖೆ |
| 7. | ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು ರವರು ಆರ್.ಜಿ ರಾಯಲ್ ಹೋಟೆಲ್ ರಸ್ತೆಯ ಮತ್ತು ಉಲ್ಲಾಸ್ ಚಿತ್ರಮಂದಿರ ರಸ್ತೆಗಳಲ್ಲಿ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. | - |

Scanned with CamScanner

| | | |
|---|---|---|
| 8. | ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರು ರವರು ವಾರ್ಡ್ ವ್ಯಾಪ್ತಿಯಲ್ಲಿ ಗಾಂಜಾ ಸೇವನೆ ಜಾಸ್ತಿಯಾಗಿರುವುದರಿಂದ ಎಲ್ಲಾ ಪೋಲೀಸ್ ಠಾಣೆಗೆ ಗಾಂಜಾ ಸೇವಕರ ವಿರುದ್ಧ ಕ್ರಮಕೈಗೊಳ್ಳಲು ತಿಳಿಸಬೇಕು ಎಂದು ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಸೂಚಿಸಲಾಗುವುದು ಎಂದು ತಿಳಿಸಿದರು. | ಪೋಲೀಸ್ ಇಲಾಖೆ |
| 9. | ವಾರ್ಡ್ ವ್ಯಾಪ್ತಿಯಲ್ಲಿ ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸುವ ಬಗ್ಗೆ ಈವರೆಗೂ ಯಾವುದೇ ಯೋಜನೆ ನೀಡದೇ ಇರುವುದರಿಂದ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರು ಒತ್ತಾಯದ ಮೇರೆಗೆ ಮುಂದಿನ ಸಭೆಗೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಘನತ್ಯಾಜ್ಯ ರವರು ದಾಖಲೆಗಳೊಂದಿಗೆ ಸಭೆಗೆ ಹಾಜರಾಗಲು ತಿಳಿಸಬೇಕೆಂದು ಕೋರಿದರು. | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) |
| 10. | ಎಲ್ಲಾ ಸದಸ್ಯರು ರವರು ವಾರ್ಡ್ ವ್ಯಾಪ್ತಿಯಲ್ಲಿ ಅನಾಮಿಕರು ರಸ್ತೆಗಳಲ್ಲಿ ವಾಹನಗಳನ್ನು ನಿಲ್ಲಿಸಿ ಹೋಗುತ್ತಿರುತ್ತಾರೆ ಸದರಿ ವಾಗಹನಗಳನ್ನು ತೆರವುಗೊಳಿಸುವ ಬಗ್ಗೆ ಸಂಚಾರಿ ಪೋಲೀಸ್ ಠಾಣೆ ರವರಿಗೆ ತಿಳಿಸಬೇಕು ಎಂದು ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಸೂಚಿಸಲಾಗುವುದು ಎಂದು ತಿಳಿಸಿದರು. | ಸಂಚಾರಿ ಇಲಾಖೆ |
| 11. | ಶ್ರೀ ನಾಗೇಂದ್ರ ಸದಸ್ಯರು ರವರು ವಾರ್ಡ್ ವ್ಯಾಪ್ತಿಯಲ್ಲಿರುವ ಖಾಲಿ ನಿವೇಶನಗಳ ಸ್ವಚ್ಚತೆ ಬಗ್ಗೆ ಮಾಹಿತಿ ಕೋರಿದರು. ಕಂದಾಯ ಇಲಾಖೆ ಅಧಿಖಾರಿಗಳು ಹಾಜರಿರಲಿಲ್ಲ | – |
| 12. | ಶ್ರೀ ನಾಗೇಂದ್ರ ಸದಸ್ಯರು ರವರು ಕೆ.ಎಚ್.ಬಿ ಕಾಲೋನಿಯಲ್ಲಿ ನೀರಿನ ಕೊರತೆ ಇದೆ ಆದ್ದರಿಂದ ಒಂದು ಕೊಳವೆ ಬಾವಿ ಕೋರೆಯಬೇಕು ಎಂದು ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು. | – |
| 13. | ಶ್ರೀ ಪುಟ್ಟಸ್ವಾಮಿ ಸದಸ್ಯರು ರವರು ಅಂತಿಮವಾಗಿ ಸಭೆಗೆ ಹಾಜರಿದ್ದ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಮತ್ತು ಸಾರ್ವಜನಿಕರಿಗೆ ವಂದನೆಗಳು ಹೇಳುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು. | – |

**ಅಧ್ಯಕ್ಷರು**

L. Venkatesh 4/3/22

ವಾರ್ಡ್ ಕಮಿಟಿ, ವಾರ್ಡ್.ಸಂಖ್ಯೆ.44

ಮಾರಪ್ಪನಪಾಳ್ಯ

Scanned with CamScanner